Akashvani : Bangalore
National Bulletin In Kannada
24.01.2025 : 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
24.01.2025 : 13.10hrs
******

ಮುಖ್ಯಾಂಶಗಳು:

1. ದೇಶಾದ್ಯಂತ ಇಂದು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ; ಉಜ್ವಲ ಭವಿಷ್ಯಕ್ಕಾಗಿ ಹೆಣ್ಣು ಮಕ್ಕಳ ಸಬಲೀಕರಣ ಈ ಬಾರಿಯ ಘೋಷ ವಾಕ್ಯ
2. ಗಣರಾಜ್ಯೋತ್ಸವದಲ್ಲಿ ಪಾಲ್ಗೊಳ್ಳಲಿರುವ ಎನ್‌ಸಿಸಿ ಕೆಡೆಟ್, ಸ್ತಬ್ಧಚಿತ್ರ ಕಲಾವಿದರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಂವಾದ
3. ದೆಹಲಿ ವಿಧಾನಸಭಾ ಚುನಾವಣೆ; ವಿವಿಧ ರಾಜಕೀಯ ಪಕ್ಷಗಳಿಂದ ಮುಂದುವರೆದ ಬಿರುಸಿನ ಪ್ರಚಾರ
4. ಖೇಲೋ ಇಂಡಿಯಾ ವಿಂಟರ್ ಗೇಮ್ಸ್; ಲಡಾಖ್‌ನ ಲೇಹ್‌ನಲ್ಲಿ ಇಂದು ಉದ್ಘಾಟನೆ

******

ದೇಶಾದ್ಯಂತ ಇಂದು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನವನ್ನು ಆಚರಿಸಲಾಗುತ್ತಿದೆ. ಸಮಾಜದಲ್ಲಿ ಹೆಣ್ಣು ಮಕ್ಕಳ ಹಕ್ಕುಗಳು, ಶಿಕ್ಷಣ, ಆರೋಗ್ಯ ಹಾಗೂ ಸುರಕ್ಷತೆಯ ಬಗ್ಗೆ ಜಾಗೃತಿ ಮೂಡಿಸುವ ಗುರಿ ಇದು ಹೊಂದಿದೆ. ಪ್ರತಿ ವರ್ಷ ಜನವರಿ ೨೪ ರಂದು ಆಚರಿಸಲಾಗುವ ಈ ದಿನ. ಪ್ರತಿಯೊಬ್ಬ ಹೆಣ್ಣು ಮಗುವನ್ನು ಗೌರವದಿಂದ ನಡೆಸಿಕೊಳ್ಳುವ, ಅವರನ್ನು ಬೆಳೆಯಲು, ಕಲಿಯಲು ಹಾಗೂ ಅಭಿವೃದ್ಧಿ ಹೊಂದಲು ಸಮಾನ ಅವಕಾಶ ಹೊಂದಿರುವುದನ್ನು ಖಾತರಿಪಡಿಸಿಕೊಳ್ಳುವುದನ್ನು ನೆನಪಿಸುತ್ತದೆ. ಪ್ರಧಾನಿ ನರೇಂದ್ರ ಮೋದಿ ಅವರು, ೧೦ ವರ್ಷಗಳ ಹಿಂದೆ ೨೦೧೫ರ ಜನವರಿ ೨೨ ರಂದು ಪ್ರಾರಂಭಿಸಿದ ಬೇಟಿ ಬಚಾವೋ-ಬೇಟಿ ಪಡಾವೋ ವಾರ್ಷಿಕೋತ್ಸವ ಕೂಡ  ಈ ದಿನವನ್ನು ಸೂಚಿಸುತ್ತದೆ. ಈ ಮಹತ್ವದ ಉಪಕ್ರಮ ಹೆಣ್ಣು ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಸುರಕ್ಷತೆಯನ್ನು ಉತ್ತೇಜಿಸುವುದರ ಜೊತೆಗೆ ಹೆಣ್ಣು ಭ್ರೂಣ ಹತ್ಯೆ, ಬಾಲ್ಯವಿವಾಹ ಮತ್ತು ಲಿಂಗ ತಾರತಮ್ಯದಂತಹ ಸಮಸ್ಯೆಗಳನ್ನು ಪರಿಹರಿಸುವ ಗುರಿಯನ್ನು ಹೊಂದಿದೆ. ೨೦೨೫ರ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನದ ಧ್ಯೇಯ ವಾಕ್ಯ ' ಉಜ್ವಲ ಭವಿಷ್ಯಕ್ಕಾಗಿ ಹೆಣ್ಣು ಮಕ್ಕಳನ್ನು ಸಬಲೀಕರಣಗೊಳಿಸುವುದು' ಈ ಘೋಷವಾಕ್ಯವು ಹೆಣ್ಣು ಮಕ್ಕಳಿಗೆ ಸಮಾಜದಲ್ಲಿ ಅವರ ಪಾತ್ರವನ್ನು ಗುರುತಿಸಿ ಅವರ ಭವಿಷ್ಯವನ್ನು ಮುನ್ನಡೆಸಲು ಸಮಾನ ಅವಕಾಶ ಕಲ್ಪಿಸುವ ಅಗತ್ಯವನ್ನು ಒತ್ತು ಹೇಳಿವೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ಆರಂಭಿಸಿದ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನವನ್ನು ಮೊದಲು ೨೦೦೮ರಲ್ಲಿ ಆಚರಿಸಲಾಯಿತು. ಬಾಲ್ಯ ವಿವಾಹ, ಹೆಣ್ಣು ಭ್ರೂಣ ಹತ್ಯೆ, ಲಿಂಗ ಅಸಮಾನತೆಯಂತಹ ಸಮಸ್ಯೆಗಳನ್ನು ಪರಿಹರಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಸಮಾಜದಲ್ಲಿ ಬಾಲಕಿಯರು ಎದುರಿಸುತ್ತಿರುವ ಸವಾಲುಗಳ ಬಗ್ಗೆ

ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿದೆ. ಹೆಣ್ಣು ಮಕ್ಕಳ ಒಟ್ಟಾರೆ ಅಭಿವೃದ್ಧಿಗೆ ಶಿಕ್ಷಣ, ಆರೋಗ್ಯ ಮತ್ತು ಪೋಷಣೆಯ ಮಹತ್ವವನ್ನು ಇದು ಒತ್ತಿ ಹೇಳುತ್ತದೆ.

******

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಕೇಂದ್ರ ಬಜೆಟ್ ಸಿದ್ಧತಾ ಪ್ರಕ್ರಿಯೆಯ ಅಂತಿಮ ಹಂತವಾದ ಹಲ್ವಾ ಸಮಾರಂಭವನ್ನು ನವದೆಹಲಿಯಲ್ಲಿಂದು ನಡೆಸಲಿದ್ದಾರೆ. ಸಂಪ್ರದಾಯದಂತೆ ನಿರ್ಮಲಾ ಸೀತಾರಾಮನ್ ಅವರೊಂದಿಗೆ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ, ಹಣಕಾಸು ಸಚಿವಾಲಯದ ಕಾರ್ಯದರ್ಶಿಗಳು ಮತ್ತು ಹಿರಿಯ ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ೨೦೨೫-೨೬ರ ಸಾಲಿನ ಕೇಂದ್ರ ಬಜೆಟ್ ಅನ್ನು ಬರುವ ಫೆಬ್ರವರಿ ತಿಂಗಳ ಮೊದಲ ತಾರೀಖಿನಂದು ಸಂಸತ್ತಿನಲ್ಲಿ ಮಂಡಿಸಲಾಗುವುದು. ಹಲ್ವಾ ಸಮಾರಂಭ ಹಣಕಾಸು ಸಚಿವಾಲಯದಲ್ಲಿ ಗೌಪ್ಯತೆಯ ಆರಂಭವನ್ನು ಸೂಚಿಸುತ್ತದೆ, ಬಜೆಟ್ ಪ್ರತಿ ಸಿದ್ಧಪಡಿಸುವ ತಂಡದ ಯಾವುದೇ ಅಧಿಕಾರಿ-ಸಿಬ್ಬಂದಿ ಸಚಿವಾಲಯದ ಆವರಣದಿಂದ ಹೊರಹೋಗಲು ಅವಕಾಶವಿಲ್ಲ. ಸಂಸತ್ತಿನಲ್ಲಿ ಬಜೆಟ್ ಮಂಡಿಸಿದ ನಂತರವೇ ಬಜೆಟ್ ಸಿದ್ಧಪಡಿಸುವ ತಂಡ ಹೊರಗೆ ಬರುತ್ತದೆ.

******

ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿಂದು ೨೦೨೫ರ ಗಣರಾಜ್ಯೋತ್ಸವದಲ್ಲಿ ಪಾಲ್ಗೊಳ್ಳಲಿರುವ ಎನ್‌ಸಿಸಿ ಕೆಡೆಟ್‌ಗಳು, ಎನ್‌ಎಸ್‌ಎಸ್ ಸ್ವಯಂ ಸೇವಕರು, ಯುವ ವಿನಿಮಯ ಯೋಜನೆ ಕೆಡೆಟ್‌ಗಳು, ಸ್ತಬ್ಧಚಿತ್ರಗಳ ಕಲಾವಿದರು ಹಾಗೂ ಬುಡಕಟ್ಟು ಅತಿಥಿಗಳನ್ನು ಭೇಟಿ ಮಾಡಲಿದ್ದಾರೆ. ದೆಹಲಿಯ ಲೋಕ ಕಲ್ಯಾಣದ ಮಾರ್ಗದಲ್ಲಿರುವ ಪ್ರಧಾನಮಂತ್ರಿಗಳ ನಿವಾಸದಲ್ಲಿ ಈ ಸಂಬಂಧ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿ, ಸ್ತಬ್ಧಚಿತ್ರ ಕಲಾವಿದರು, ಎನ್‌ಸಿಸಿ ಕೆಡೆಟ್‌ಗಳೊಂದಿಗೆ ಸಂವಾದ ನಡೆಸಲಿದ್ದಾರೆ.

*****

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ಇಂದು ಬಿಹಾರಕ್ಕೆ ಭೇಟಿ ನೀಡಲಿದ್ದಾರೆ. ಬಿಹಾರದ ಸಮಸ್ತಿಪುರದಲ್ಲಿ ನಡೆಯಲಿರುವ ಭಾರತ ರತ್ನ ಕರ್ಪೂರಿ ಠಾಕೂರ್ ಅವರ ೧೦೧ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಕರ್ಪೂರಿ ಗ್ರಾಮದಲ್ಲಿ ಜನ್ಮ ದಿನಾಚರಣೆ ಆಯೋಜಿಸಲಾಗಿದ್ದು, ಸಮಾರಂಭದಲ್ಲಿ ಬಿಹಾರ ರಾಜ್ಯಪಾಲ ಆರೀಫ್ ಮೊಹಮ್ಮದ್ ಖಾನ್, ಮುಖ್ಯಮಂತ್ರಿ ನಿತೀಶ್ ಕುಮಾರ್, ರಾಜ್ಯಸಭೆಯ ಉಪಸಭಾಪತಿ ಹರಿವಂಶ್, ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಸೇರಿದಂತೆ ಹಲವು ಗಣ್ಯರು ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ. ಜನ್ಮದಿನದ ಅಂಗವಾಗಿ ಸರ್ವಧರ್ಮ ಪ್ರಾರ್ಥನಾ ಸಭೆಯನ್ನು ಸಹ ಆಯೋಜಿಸಲಾಗಿದೆ.

******

ಮುಂದಿನ ತಿಂಗಳ ಫೆಬ್ರವರಿ ೫ ರಂದು ವಿಧಾನಸಭಾ ಚುನಾವಣೆಗೆ ದೆಹಲಿ ಸಜ್ಜುಗೊಳ್ಳುತ್ತಿದೆ. ಮತದಾರರನ್ನು ಪಕ್ಷದ ಅಭ್ಯರ್ಥಿಗಳ ಪರ ಸೆಳೆಯಲು ಪ್ರಮುಖ ರಾಜಕೀಯ ಪಕ್ಷಗಳ ನಾಯಕರು ಇನ್ನಿಲ್ಲದ ಪ್ರಯತ್ನದಲ್ಲಿ ನಿರತರಾಗಿದ್ದಾರೆ. ರ್‍ಯಾಲಿಗಳು, ರೋಡ್ ಶೋಗಳು, ಮನೆ-ಮನೆ ಪ್ರಚಾರದ ಮೂಲಕ ಬಿಜೆಪಿ, ಆಮ್ ಆದ್ಮಿ ಪಕ್ಷ ಹಾಗೂ ಕಾಂಗ್ರೆಸ್ ಪಕ್ಷದ ಪ್ರಮುಖ ನಾಯಕರು ಮತದಾರರನ್ನು ಸೆಳೆಯಲು ಮುಂದಾಗಿದ್ದಾರೆ. ಬಿಜೆಪಿ ನಾಯಕ, ಉತ್ತರಾಖಂಡ್ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ನವದೆಹಲಿ ವಿಧಾನಸಭಾ ಕ್ಷೇತ್ರದಲ್ಲಿ ಇಂದು ಸಂಜೆ ಸಾರ್ವಜನಿಕ ರ್‍ಯಾಲಿ ಉದ್ದೇಶಿಸಿ ಮಾತನಾಡಲಿದ್ದಾರೆ. ಹಿರಿಯ ಬಿಜೆಪಿ ನಾಯಕ ಮಾಜಿ ಕೇಂದ್ರ ಸಚಿವ ಅನುರಾಗ್ ಸಿಂಗ್ ಠಾಕೂರ್, ಮಂಗೊಲ್ ಪುರಿ, ನವದೆಹಲಿ ಹಾಗೂ ದ್ವಾರಕಗಳಲ್ಲಿ ಹಲವು ಚುನಾವಣಾ ಸಭೆಗಳನ್ನು ನಡೆಸಲಿದ್ದಾರೆ. ಈ ನಡುವೆ, ಬಿಜೆಪಿಯ ನವದೆಹಲಿಯ ಸಂಸದೆ ಬಾನ್ಸುರಿ ಸ್ವರಾಜ್ ಇಂದು ಸಂಜೆ ಶಾಲಿಮಾರ್‌ಬಾಗ್ ವಿಧಾನಸಭಾ ಕ್ಷೇತ್ರದಲ್ಲಿ ಸಂವಾದ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಬಿಜೆಪಿ ಮಾಜಿ ಸಂಸದೆ ಲಾಕೆಟ್ ಚಟರ್ಜಿ ಕರೋಲ್ ಬಾಗ್ ಹಾಗೂ ಕಲ್ಕಾಜಿ ವಿಧಾನಸಭಾ ಕ್ಷೇತ್ರಗಳಲ್ಲಿ ಚುನಾವಣಾ ಪ್ರಚಾರ ನಡೆಸಲಿದ್ದಾರೆ. ಮತ್ತೊಂದು ಕಡೆ ಆಪ್ ಪಕ್ಷದ ರಾಷ್ಟ್ರೀಯ ಸಂಚಾಲಕ ದೆಹಲಿ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್, ನಜಾಫ್‌ಗಢ, ಉತ್ತಮ್ ನಗರ್, ದ್ವಾರಕ ಕ್ಷೇತ್ರಗಳಲ್ಲಿ ರೋಡ್ ಶೋಗಳನ್ನು ನಡೆಸಲಿದ್ದಾರೆ. ಮತ್ತೊಬ್ಬ ಹಿರಿಯ ಆಪ್ ನಾಯಕ ರಾಜ್ಯಸಭಾ ಸದಸ್ಯ ಸಂಜಯ್ ಸಿಂಗ್, ಶಾಲಿಮಾರ್‌ಬಾಗ್, ಮಂಗೋಲ್‌ಪುರಿ, ಸುಲ್ತಾನ್‌ಪುರ್, ಮಾಜ್ರಾ ಹಾಗೂ ನಂಗೋಲಿ ಜಾಟ್ ವಿಧಾನಸಭಾ ಕ್ಷೇತ್ರಗಳಲ್ಲಿ ಚುನಾವಣಾ ಸಭೆ ನಿಗದಿಯಾಗಿದೆ. ಈ ಮಧ್ಯೆ, ಹಿರಿಯ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಮಾದಿಪುರ್ ವಿಧಾನಸಭಾ ಕ್ಷೇತ್ರದಲ್ಲಿ ಪಕ್ಷದ ಅಭ್ಯರ್ಥಿ ಜೆ.ಪಿ.ಪನ್ವಾರ್ ಪರವಾಗಿ ಬೃಹತ್ ರ್‍ಯಾಲಿ ನಿಗದಿಯಾಗಿದೆ.

******

ಅಮೆರಿಕಾದಲ್ಲಿ ಉತ್ಪನ್ನಗಳ ತಯಾರಿಕೆ ನಡೆಸಿದರೆ, ಕಡಿಮೆ ತೆರಿಗೆ ವಿಧಿಸುವುದಾಗಿ ಉದ್ಯಮ ನಾಯಕರಿಗೆ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಹ್ವಾನ ನೀಡಿದ್ದಾರೆ. ವಿಶ್ವ ಆರ್ಥಿಕ ವೇದಿಕೆ ಸಭೆಯನ್ನು ವಿಡಿಯೊ ಕಾನ್ಫರೆನ್ಸ್ ಮೂಲಕ ಉದ್ದೇಶಿಸಿ ಮಾತನಾಡಿದ ಟ್ರಂಪ್, ಅಮೆರಿಕಾದಲ್ಲಿ ಉತ್ಪನ್ನಗಳನ್ನು ತಯಾರಿಸದಿದ್ದರೆ ಸುಂಕ ವಿಧಿಸುವುದಾಗಿ ಉದ್ಯಮಿಗಳಿಗೆ ಎಚ್ಚರಿಕೆ ನೀಡಿದ್ದಾರೆ.

*******

ತೈಲ ಬೆಲೆ ತಗ್ಗಿಸುವಂತೆ ಸೌಧಿ ಅರೇಬಿಯಾ ಹಾಗೂ ತೈಲ ರಫ್ತು ಮಾಡುವ ದೇಶಗಳ ಸಂಘಟನೆ-ಓಪೆಕ್ ಅನ್ನು ಕೋರುವುದಾಗಿ, ಇದರಿಂದ ರಷ್ಯಾ ಮತ್ತು ಉಕ್ರೇನ್ ನಡುವಣ ಸಂಘರ್ಷ ತಕ್ಷಣವೇ ಅಂತ್ಯಗೊಳ್ಳುತ್ತದೆ ಎಂದು ಅವರು ಹೇಳಿದ್ದಾರೆ.

ಉಕ್ರೇನ್ ಸಂಘರ್ಷದಿಂದಾಗಿ ಅಮೆರಿಕಾ ಹೆಚ್ಚಿನ ಜಾಗತಿಕ ರಕ್ಷಣಾ ವೆಚ್ಚದ ಹೊರೆ ಹೊರುತ್ತಿದೆ. ನ್ಯಾಟೊ ರಾಷ್ಟ್ರಗಳು ತಮ್ಮ ರಕ್ಷಣಾ ವೆಚ್ಚವನ್ನು ಜಿಡಿಪಿಯ ಶೇಕಡ ೫ ರಷ್ಟು ಹೆಚ್ಚಿಸುವಂತೆಯೂ ಟ್ರಂಪ್ ಕರೆ ನೀಡಿದ್ದಾರೆ. ಉಕ್ರೇನ್-ರಷ್ಯಾ ಸಂಘರ್ಷದಿಂದಾಗಿ ಅಮೆರಿಕಾ ನ್ಯಾಟೊಗಿಂತ ೨೦೦ ಶತಕೋಟಿ ಡಾಲರ್‌ಗಳನ್ನು ಹೆಚ್ಚು ವೆಚ್ಚ ಮಾಡಿದೆ ಎಂದು ಟ್ರಂಪ್ ತಿಳಿಸಿದ್ದಾರೆ. ಕಾರ್ಯಕಾರಿ ಆದೇಶಗಳಿಗೆ ಸಹಿ ಹಾಕಿದ ಸಮಾರಂಭದಲ್ಲಿ ನೀಡಿದ್ದ ಹೇಳಿಕೆಗಳನ್ನು ಪುನರುಚ್ಚರಿಸಿದ ಅವರು, ನ್ಯಾಟೊದ ಹಣಕಾಸಿನ ಕೊಡುಗೆಗಳನ್ನು ಒತ್ತಿ ಹೇಳಿದ್ದಾರೆ. ಪಶ್ಚಿಮ ಏಷ್ಯಾದಲ್ಲಿ ಕದನ ವಿರಾಮ ಮಾತುಕತೆಗಳ ಬಗ್ಗೆಯೂ ಟ್ರಂಪ್ ಪ್ರಸ್ತಾಪಿಸಿದ್ದಾರೆ. ಅಮೆರಿಕಾ ಅಧ್ಯಕ್ಷರಾಗಿ ಎರಡನೇ ಅವಧಿಗೆ ಅಧಿಕಾರವಹಿಸಿಕೊಂಡ ನಂತರ ಅಮೆರಿಕಾದ ದೇಶೀಯ ಹಾಗೂ ಅಂತಾರಾಷ್ಟ್ರೀಯ ನೀತಿಗಳಲ್ಲಿ ಜಾರಿಗೆ ತಂದಿರುವ ತುರ್ತು ಬದಲಾವಣೆಗಳನ್ನು ಒತ್ತಿ ಹೇಳಿದ್ದಾರೆ. ತಮ್ಮ ಭಾಷಣದಲ್ಲಿ ಟ್ರಂಪ್ ನ್ಯಾಟೊ ದೇಶಗಳು ತಮ್ಮ ರಕ್ಷಣಾ ವೆಚ್ಚವನ್ನು ಹೆಚ್ಚಿಸುವಂತೆ ಒತ್ತಾಯಿಸಿದ್ದಾರೆ.

******

ಬಿಹಾರದ ಮಾಜಿ ಮುಖ್ಯಮಂತ್ರಿ ಭಾರತ ರತ್ನ ಕರ್ಪೂರಿ ಠಾಕೂರ್ ಅವರ ಜನ್ಮ ವಾರ್ಷಿಕ ದಿನವಾದ ಇಂದು ಅವರಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ನಮನ ಸಲ್ಲಿಸಿದ್ದಾರೆ. ಠಾಕೂರ್ ಅವರು ತಮ್ಮ ಇಡೀ ಬದುಕನ್ನು ಸಾಮಾಜಿಕ ನ್ಯಾಯಕ್ಕಾಗಿ ಸಮರ್ಪಿಸಿ, ಆ ನಿಟ್ಟಿನಲ್ಲಿ ಹಲವು ಪ್ರಯತ್ನಗಳನ್ನು ನಡೆಸಿದ್ದರು ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಕರ್ಪೂರಿ ಠಾಕೂರ್ ಅವರ ಜೀವನ ಹಾಗೂ ಆದರ್ಶಗಳು ದೇಶದ ಪ್ರತಿಯೊಂದು ತಲೆಮಾರಿಗೂ ನಿರಂತರ ಸ್ಫೂರ್ತಿಯಾಗಲಿದೆ ಎಂದು ಪ್ರಧಾನಿ ಹೇಳಿದ್ದಾರೆ.

******

ಜಮ್ಮು-ಕಾಶ್ಮೀರದ ಶ್ರೀನಗರದಲ್ಲಿರುವ ಸಹಸ್ರ ಸೀಮಾ ಬಲ-ಎಸ್‌ಎಸ್‌ಬಿ ೧೦ನೇ ಬೆಟಾಲಿಯನ್ ಕಾಶ್ಮೀರ ಕಣಿವೆಯಲ್ಲಿರುವ ಯುವ ವಿದ್ಯಾರ್ಥಿಗಳಿಗೆ ಇದೇ ೨೮ ರಿಂದ ಫೆಬ್ರವರಿ ೫ರವರೆಗೆ ಭಾರತ ದರ್ಶನ್ ಅಧ್ಯಯನ ಯಾತ್ರೆಯನ್ನು ಹಮ್ಮಿಕೊಂಡಿದೆ. ಈ ಯಾತ್ರೆಯ ಭಾಗವಾಗಿ ಇದೇ ೨೮ ರಿಂದ ಫೆಬ್ರವರಿ ೫ರವರೆಗೆ ಬೆಂಗಳೂರು-ಮೈಸೂರು ಹಾಗೂ ದೆಹಲಿ ಪ್ರವಾಸ ನಡೆಸಲಿದೆ. ಮೈಸೂರು-ಬೆಂಗಳೂರು ಭೇಟಿಯ ವೇಳೆ ಈ ಎರಡೂ ನಗರಗಳ ಪ್ರಮುಖ ಸ್ಥಳಗಳಿಗೆ ವಿದ್ಯಾರ್ಥಿಗಳನ್ನು ಕರೆದೊಯ್ಯಲಿದೆ. ಫೆಬ್ರವರಿ ೧ ರಂದು ಕರ್ನಾಟಕ ರಾಜ್ಯಪಾಲರೊಂದಿಗೆ ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಎಸ್‌ಎಸ್‌ಬಿ ಅಧಿಕೃತ ಹೇಳಿಕೆಯಲ್ಲಿ ತಿಳಿಸಿದೆ.

******

ಖೇಲೋ ಇಂಡಿಯಾ ವಿಂಟರ್ ಗೇಮ್ಸ್ ೨೦೨೫ ಇಂದು ಲಡಾಖ್‌ನ ಲೇಹ್‌ನಲ್ಲಿರುವ ನವಾಂಗ್ ದೋರ್ಜಯ್ ಸ್ಟೊಬ್ಡಾನ್-ಎನ್‌ಡಿಎಸ್ ಕ್ರೀಡಾ ಸಂಕೀರ್ಣದಲ್ಲಿ ಉದ್ಘಾಟನೆಗೊಳ್ಳಲಿದೆ. ಖೇಲೋ ಇಂಡಿಯಾ ವಿಂಟರ್ ಗೇಮ್ಸ್‌ನ ಮೊದಲ ಹಂತವು ಇದೇ ೨೭ ರವರೆಗೆ ಲಡಾಖ್‌ನಲ್ಲಿ ನಡೆಯಲಿದೆ.

ಎರಡು ಕ್ರೀಡೆಗಳು - ಐಸ್ ಹಾಕಿ ಮತ್ತು ಐಸ್ ಸ್ಕೇಟಿಂಗ್ - ಲಡಾಖ್‌ನಲ್ಲಿ ನಡೆಯಲಿದೆ. ಫೆಬ್ರವರಿ ೨೨ ರಿಂದ ೨೫ ರವರೆಗೆ ಜಮ್ಮು ಮತ್ತು ಕಾಶ್ಮೀರ ಎರಡನೇ ಹಂತವನ್ನು ಆಯೋಜಿಸಲಿದೆ.

******